## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ಸತ್ಯಾನಂದ ಡಿ.ಆರ್, ಹಿಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂ.ರಾ.ಇಂ ಉಪವಿಭಾಗ, ತಿಪಟೂರು(ಹಾಲಿ ನಿವೃತ್ತ) ಇವರ ವಿರುದ್ಧ ಇಲಾಖಾ ವಿಚಾರಣೆ, ಆರೋಪಗಳಿಂದ ಕೈಬಿಡುವ ಬಗ್ಗೆ ಆದೇಶ.

ಓದಲಾಗಿದೆ:

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ತುಮಕೂರು ಇವರ ಪತ್ರ ಸಂಖ್ಯೆ:ತುಜಿಪ:ಆ(7) ಇಂವಿವ/17-18, ದಿನಾಂಕ:26.04.2019
2. ಸರ್ಕಾರದ ಕಾರಣ ಕೇಳುವ ನೋಟಿಸ್ ಸಂಖ್ಯೆ:ಗ್ರಾಅಪ 78 ಇಎನ್‌ಕ್ಯೂ 2017, ದಿನಾಂಕ:27.06.2019
3. ಆಪಾಧಿತರ ವಿವರಣೆ ದಿನಾಂಕ:13.11.2019.

ಪ್ರಸ್ತಾವನೆ:

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ತುಮಕೂರು ರವರು ಮೇಲೆ ಓದಲಾದ ಕ್ರಮಾಂಕ (1)ರ ದಿನಾಂಕ:26.04.2019 ರ ಪತ್ರದಲ್ಲಿ ಶ್ರೀ ಡಿ.ಆರ್.ಸತ್ಯಾನಂದ, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂ.ರಾ.ಇಂ.ಉಪವಿಭಾಗ, ತಿಪಟೂರು ಇವರ ಕಾರ್ಯಕ್ಷಮತೆ ಮತ್ತು ಅಸಮರ್ಪಕ ಕಾರ್ಯವೈಖರಿಯಿಂದಾಗಿ ವಿವಿಧ ಯೋಜನೆಗಳ ಪ್ರಗತಿಯಲ್ಲಿ ಕುಂಠಿತವಾಗಿರುವುದೆಂದು, ಸಾರ್ವಜನಿಕರಿಗೆ ಸ್ಪಂದಿಸದಿರುವುದು ಕಂಡುಬಂದಿದೆಯೆಂದು, ನರೇಗಾ ಯೋಜನೆಯಡಿ ಬಿಡುಗಡೆಯಾದ ಅನುದಾನವನ್ನು ಬಳಸಿಕೊಳ್ಳದೇ ಅನುದಾನ ವ್ಯಪಗತವಾಗಲು ಕಾರಣರಾಗಿರುತ್ತಾರೆಂಬ ಆರೋಪಗಳಿಗೆ ಸಂಬಂಧಿಸಿದಂತೆ, ಸದರಿಯವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಆರೋಪ ಪಟ್ಟಿ ಅನುಬಂಧ-1 ರಿಂದ 4ನ್ನು ತಯಾರಿಸಿ, ಸರ್ಕಾರಕ್ಕೆ ಸಲ್ಲಿಸಿದ್ದರು.

ಸರ್ಕಾರವು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ತುಮಕೂರು ಇವರ ಸಲ್ಲಿಸಿದ್ದ ಪ್ರಸ್ತಾವನೆಯನ್ನು ಪರಿಶೀಲಿಸಿ, ಸದರಿ ಅಧಿಕಾರಿಯ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 11 ರಡಿ ಇಲಾಖೆ ವಿಚಾರಣೆ ಜರುಗಿಸಲು ಉದ್ದೇಶಿಸಿ, ಮೇಲೆ ಓದಲಾದ ಕ್ರಮಾಂಕ (2) ರ ದಿನಾಂಕ:27.06.2019 ರಂದು ಕಾರಣ ಕೇಳುವ ನೋಟಿಸ್‌ನೊಂದಿಗೆ ಆರೋಪ ಪಟ್ಟಿ ಅನುಬಂಧ-1 ರಿಂದ 4 ನ್ನು ಜಾರಿ ಮಾಡಲಾಗಿತ್ತು.

ಶ್ರೀ ಸತ್ಯಾನಂದ ಡಿ.ಆರ್ ಇವರು ಮೇಲೆ ಓದಲಾದ ಕ್ರಮಾಂಕ (3) ರ ದಿನಾಂಕ:13.11.2019 ರಂದು ವಿವರಣೆ ಸಲ್ಲಿಸಿ ನರೇಗಾ ಯೋಜನೆಗೆ ಸಂಬಂಧಿಸಿದಂತೆ ಸದರಿ ಕಾಮಗಾರಿಗಳಲ್ಲಿ ಹಣ ವ್ಯಪಗತವಾಗಿದೆ ಎಂಬ ಆರೋಪಕ್ಕೆ ಸಂಬಂಧಿಸಿದಂತೆ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಗಳು ಬೇಡಿಕೆ ಆಧಾರದ ಮೇಲೆ ಕೈಗೆತ್ತಿಕೊಳ್ಳಬೇಕಾದ ಯೋಜನೆಗಳಾಗಿರುವುದರಿಂದ ಕಾರ್ಮಿಕರು ಉದ್ಯೋಗಕ್ಕಾಗಿ ಉದ್ಯೋಗ ಚೀಟಿಯೊಂದಿಗೆ ಬೇಡಿಕೆ ಸಲ್ಲಿಸಿರುವ ಗ್ರಾಮ ಪಂಚಾಯಿತಿಗಳಲ್ಲಿ ಅನುಮೋದನೆ ಆದ 16 ಚೆಕ್ ಡ್ಯಾಂಗಳಲ್ಲಿ 3 ಚೆಕ್ ಡ್ಯಾಂಗಳನ್ನು ಕೈಗೆತ್ತಿಕೊಂಡು ಅದೇ ಸಾಲಿನಲ್ಲಿ ಪೂರ್ಣಗೊಳಿಸಲಾಗಿದೆ. ಉಳಿದ ಕಾಮಗಾರಿಗಳಿಗೆ ಕಾರ್ಮಿಕರಿಂದ ಬೇಡಿಕೆ ಬಾರದ ಕಾರಣ ಅನುಷ್ಠಾನಗೊಳಿಸಲು ಸಾಧ್ಯವಾಗಿರುವುದಿಲ್ಲ. ಸದರಿ ಕಾಮಗಾರಿಗಳು ಯಾವುದೇ ಅನುಬಂಧದಲ್ಲಿ ಸೇರಿರದ ಕಾರಣ ಹಾಗೂ ಯಾವುದೇ ಕಾಲಮಿತಿಯನ್ನು ನಿಗಧಿಪಡಿಸದ ಕಾರಣ ಅನುದಾನ ವ್ಯಪಗತವಾಗಿರುವುದಿಲ್ಲವೆಂದು ತಿಳಿಸಿರುತ್ತಾರೆ.

ಪ್ರಗತಿ ಪರಿಶೀಲನಾ ಸಭೆಗೆ ಹಾಜರಾಗಿ ಬೇಜವಬ್ದಾರಿಯುತವಾಗಿ ಉತ್ತರ ನೀಡಿರುತ್ತಾರೆಂಬ ಆರೋಪಕ್ಕೆ ಸಂಬಂಧಿಸಿದಂತೆ ವಿವರಣೆ ಸಲ್ಲಿಸಿ ದಿನಾಂಕ:08.06.2017 ರಂದು ಜರುಗಿದ ಪ್ರಗತಿ ಪರಿಶೀಲನಾ ಸಭೆಗೆ ತಿಪಟೂರಿಗೆ

ಸಂಬಂಧಿಸಿದ ಮಾಹಿತಿಯನ್ನು ಕಾ.ಇಂ., ಪಂ.ರಾ.ಇಂ ವಿಭಾಗ, ತುಮಕೂರು ಇವರ ಮುಖಾಂತರ ಒದಗಿಸಲಾಗಿರುತ್ತದೆಯೆಂದು, ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ಆದ ವಿಳಂಬಕ್ಕೆ ಸಹ ಮಾಹಿತಿಯನ್ನು ಸಭೆಯಲ್ಲಿ ಒದಗಿಸಲಾಗಿರುತ್ತದೆಯೆಂದು ತಿಳಿಸಿರುತ್ತಾರೆ.

2016-17 ನೇ ಸಾಲಿನ ನರೇಗಾ ಯೋಜನೆಯ ಚಿಕ್ಕನಾಯಕನಹಳ್ಳಿ ತಾಲ್ಲೂಕಿನ ಬರಗೂರು ಮತ್ತು ಬರಕನಾಳು ಗ್ರಾಮ ಪಂಚಾಯಿತಿ ಮಟ್ಟದಲ್ಲಿ ನಿರ್ವಹಿಸಿರುವ ನರೇಗಾ ಕಾಮಗಾರಿಗಳನ್ನು ಪರಿಶೀಲಿಸಿ ವರದಿ ನೀಡಲು ಕೋರಲಾಗಿದ್ದು, ಎರಡು ಗ್ರಾಮ ಪಂಚಾಯಿತಿಯಲ್ಲಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹುದ್ದೆಗಳು ಖಾಲಿ ಇದ್ದ ಕಾರಣ ಕಾಮಗಾರಿಗಳನ್ನು ಪರಿಶೀಲನೆ ನಡೆಸಿ ವರದಿ ನೀಡಲು ಸಾಧ್ಯವಾಗಿರುವುದಿಲ್ಲವೆಂದು ಹಾಗೂ ದಿನಾಂಕ:28.03.2017 ರ ಆದೇಶದ ಮೇರೆಗೆ ನರೇಗಾ ಯೋಜನೆಯಡಿ ನಡೆದಿರುವ ಅವ್ಯವಹಾರದ ಬಗ್ಗೆ ವಿಚಾರಣಾ ವರದಿ ಸಿದ್ದಪಡಿಸಲು ಲೋಕಾಯುಕ್ತ ಕಛೇರಿ, ತುಮಕೂರು ಇಲ್ಲಿ ನಿಯೋಜಿಸಿದ ಮೇರೆಗೆ ಅಲ್ಲಿ ಕೂಡ ಹಾಜರಾಗಿ ಕರ್ತವ್ಯ ನಿರ್ವಹಿಸಿದ ಕಾರಣದಿಂದಾಗಿ ಕಾಲಾವಕಾಶದ ಅಭಾವದಿಂದಾಗಿ ವರದಿಯನ್ನು ಸಲ್ಲಿಸಲು ಸಾಧ್ಯವಾಗಿರುವುದಿಲ್ಲವೆಂದು ತಮ್ಮ ವಿವರಣೆಯಲ್ಲಿ ತಿಳಿಸಿರುತ್ತಾರೆ. ತಾವು ಕರ್ತವ್ಯ ನಿರ್ವಹಣೆಯಲ್ಲಿ ಯಾವುದೇ ರೀತಿಯ ಬೇಜವಬ್ದಾರಿ ತೋರಿರುವುದಿಲ್ಲ. ಸರ್ಕಾರದ ಹಣವನ್ನು ದುರುಪಯೋಗ ಮಾಡುವುದಾಗಲೀ ಅಥವಾ ಆರ್ಥಿಕ ನಷ್ಟ ಉಂಟು ಮಾಡಿರುವುದಿಲ್ಲವೆಂದು, ದಿನಾಂಕ:31.01.2019 ರಂದು ಸರ್ಕಾರಿ ಸೇವೆಯಿಂದ ವಯೋನಿವೃತ್ತಿ ಹೊಂದಿರುವುದರಿಂದ ತಮ್ಮನ್ನು ಆರೋಪಗಳಿಂದ ಮುಕ್ತಗೊಳಿಸಬೇಕೆಂದು ಕೋರಿರುತ್ತಾರೆ.

ಸರ್ಕಾರವು ಶ್ರೀ ಸತ್ಯಾನಂದ ಡಿ.ಆರ್ ಇವರು ಸಲ್ಲಿಸಿರುವ ವಿವರಣೆಯನ್ನು ಪರಿಶೀಲಿಸಿದೆ. ನರೇಗಾ ಯೋಜನೆಗೆ ಸಂಬಂಧಿಸಿದಂತೆ ಸದರಿ ಕಾಮಗಾರಿಗಳಲ್ಲಿ ಹಣ ವ್ಯಪಗತವಾಗಿದೆ ಎಂಬುದಕ್ಕೆ ಪ್ರತಿಯಾಗಿ ಆಪಾದಿತರು ಸಲ್ಲಿಸಿರುವ ವಿವರಣೆ ಸಮಂಜಸವಾಗಿರುತ್ತದೆ. ಏಕೆಂದರೆ ಕಾಮಗಾರಿಗಳನ್ನು ಕೂಲಿಗಾರರ ಬೇಡಿಕೆಯನ್ವಯ ಕೈಗೊಳ್ಳಲಾಗುತ್ತದೆ. ಪ್ರಗತಿ ಪರಿಶೀಲನಾ ಸಭೆಗೆ ಹಾಜರಾಗಿ ಬೇಜವಬ್ದಾರಿಯುತವಾಗಿ ಉತ್ತರ ನೀಡಿರುತ್ತಾರೆಂದು ಹಾಗೂ ನರೇಗಾ ಯೋಜನೆಯ ಕಾಮಗಾರಿಗಳನ್ನು ಪರಿಶೀಲಿಸಲು ತಿಳಿಸಿದ್ದರೂ ಸದರಿ ಕಾಮಗಾರಿಗಳನ್ನು ಪರಿಶೀಲಿಸದೇ ಲೋಪವೆಸಗಿರುವ ಬಗ್ಗೆ ಸದರಿ ಅಧಿಕಾರಿಯು ವಿವರಣೆ ಸಲ್ಲಿಸಿದ್ದು, ಇದರಲ್ಲಿ ಯಾವುದೇ ಗಂಭೀರ ಸ್ವರೂಪದ ಲೋಪ ದುರ್ನಡತೆ ಕಂಡುಬುರುವುದಿಲ್ಲ. ಪ್ರಸ್ತುತ ಅಧಿಕಾರಿಯು ದಿನಾಂಕ:31.01.2019 ರಂದು ಸೇವೆಯಿಂದ ನಿವೃತ್ತಿ ಹೊಂದಿರುತ್ತಾರೆ. ನಿವೃತ್ತ ಅಧಿಕಾರಿಗಳ ವಿರುದ್ಧ ಗಂಭೀರ ಸ್ವರೂಪದ ದುರ್ನಡತೆ/ಕರ್ತವ್ಯ ನಿರ್ಲಕ್ಷತೆಯ ಆರೋಪಗಳಿದ್ದಲ್ಲಿ ಇಲಾಖಾ ವಿಚಾರಣೆ ನಡೆಸಬಹುದಾಗಿದ್ದು, ಪ್ರಸಕ್ತ ಪ್ರಕರಣದಲ್ಲಿ ಅಂತಹ ದುರ್ನಡತೆ/ಕರ್ತವ್ಯ ನಿರ್ಲಕ್ಷತೆ ಕಂಡುಬರುವುದಿಲ್ಲ. ಹಾಗಾಗಿ ಇಲಾಖಾ ವಿಚಾರಣೆಯನ್ನು ನಡೆಸಬಹುದಾದ ಅಂಶಗಳು ಕಂಡುಬರುವುದಿಲ್ಲವಾದ ಕಾರಣ ಪ್ರಕರಣವನ್ನು ಈ ಹಂತಕ್ಕೆ ಮುಕ್ತಾಯಗೊಳಿಸಲು ತೀರ್ಮಾನಿಸಿದೆ. ಆದ್ದರಿಂದ ಈ ಕೆಳಕಂಡ ಆದೇಶ

**ಆದೇಶ ಸಂಖ್ಯೆ. ಗ್ರಾಅಪ 78 ಇಎನ್‌ಕ್ಯೂ 2017, ಬೆಂಗಳೂರು,**
**ದಿನಾಂಕ:09.04.2020**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರವು ಶ್ರೀ ಸತ್ಯಾನಂದ ಡಿ.ಆರ್, ಹಿಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂ.ರಾ.ಇಂ.ಉಪವಿಭಾಗ, ತಿಪಟೂರು (ಹಾಲಿ ನಿವೃತ್ತ) ಇವರನ್ನು ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 78 ಇಎನ್‌ಕ್ಯೂ 2017, ದಿನಾಂಕ:27.06.2019 ರಲ್ಲಿ ಮಾಡಲಾದ ಆರೋಪಗಳಿದ ಕೈಬಿಟ್ಟು ಪ್ರಕರಣವನ್ನು ಮುಕ್ತಾಯಗೊಳಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

09/04/2020

(ಎಸ್.ರಂಗನಗೌಡ),
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ:

1. ಮಹಾಲೇಖಪಾಲರು, (ಅ ಮತ್ತು ಇ) ಕರ್ನಾಟಕ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ.
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ತುಮಕೂರು-(ನೋಂದಾಯಿತ ಅಂಚೆ ಮುಖಾಂತರ).
4. ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಬೆಂಗಳೂರು.
5. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
6. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡ (ದಕ್ಷಿಣ), ಕೆ.ಆರ್.ಸರ್ಕಲ್, ಬೆಂಗಳೂರು.
7. ಶ್ರೀ ಸತ್ಯಾನಂದ ಡಿ.ಆರ್, ನಿವೃತ್ತ ಸ.ಕಾ.ಇಂ, ನಂ.249/ಎ, ಸವಿನೆನಪು, ಶಾರದಾದೇವಿ ನಗರ, ಬೆಳಗುಂಬ ರಸ್ತೆ, ತುಮಕೂರು.
8. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ (ಸೇವೆಗಳು-ಎ & ಸಿ).
9. ಮಾನ್ಯ ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
10. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ/ ಉಪ ಕಾರ್ಯದರ್ಶಿ (ಆಡಳಿತ) ಇವರ ಆಪ್ತ ಕಾರ್ಯದರ್ಶಿ/ ಆಪ್ತ ಸಹಾಯಕರಿಗೆ.
11. ಮೇಲ್ವಿಚಾರಕರು, ಗಣಕಯಂತ್ರ ಕೋಶ. ಗ್ರಾ.ಅ.ಪಂ.ರಾಜ್ ಇಲಾಖೆ.
12. ರಕ್ಷಾ ಕಡತ / ಹೆಚ್ಚುವರಿ ಪ್ರತಿ.